ಮೊದಲನೇ ಪುಟದಿಂದ

19 ಆಸ್ಪತ್ರೆಗಳಿಗೆ ದಂಡ

ವಿಜಯ ಕ್ಲಿನಿಕ್‌ಗೆ 15 ಸಾವಿರ ರೂ ದಂಡ ವಿಧಿಸಲಾಗಿದೆ. ಅದೇ ರೀತಿ ರಾಯಚೂರು ತಾಲೂಕಿನ ಪೀಸ್ ಹೆಲ್ತ್ ಕೇರ್‌ಗೆ 25 ಸಾವಿರ ರೂ ದಂಡ, ಶ್ರೀಸೂಗೂರೇಶ್ವರ ಕ್ಲಿನಿಕ್‌ಗೆ 50 ಸಾವಿರ ರೂ ದಂಡ ಹಾಗೂ ಮಾನವಿ ತಾಲೂಕಿನ ಪವನ್ ಕ್ಲಿನಿಕ್‌ಗೆ 15 ಸಾವಿರ ರೂ ದಂಡ ವಿಧಿಸಲಾಗಿದೆ.

ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಇತ್ತೀಚೆಗೆ ನಡೆದ ಜಿಲ್ಲಾಮಟ್ಟದ ಕೆಪಿಎಂಇ ನೋಂದಣಿ ಮತ್ತು ಕುಂದುಕೊರತೆ ಪ್ರಾಧಿಕಾರದ ಸಭೆಯಲ್ಲಿ ರಾಯಚೂರ ಜಿಲ್ಲೆಯಲ್ಲಿನ ಕೆಲವು ಖಾಸಗಿ ಕ್ಲಿನಿಕ್‌ಗಳ ಸಂಸ್ಥೆಗಳು ಕೆಪಿಎಂಇ ಕಾಯ್ದೆ ಉಲ್ಲಂಘಿಸಿದ ಬಗ್ಗೆ ಚರ್ಚೆ ಮಾಡಿ ಈ ಸಭೆಯಲ್ಲಿ ಈ ಮೇಲಿನಂತೆ ಖಾಸಗಿ ಕ್ಲಿನಿಕ್‌ಗಳಿಗೆ ದಂಡ ವಿಧಿಸಲು ನಿರ್ಣಯಿಸಲಾಗಿದೆ.

ಈ ಎಲ್ಲ ಕ್ಲಿನಿಕ್‌ಗಳು ಸಂಸ್ಥೆಗಳು ನಿಗದಿತ ಸಮಯದಲ್ಲಿ ದಂಡ ಪಾವತಿಸಬೇಕು. ವಿಳಂಬವಾದಲ್ಲಿ ಸೂಕ್ತ ರೀತಿಯ ಕ್ರಮ ಕೈಗೊಳ್ಳಲಾಗುತ್ತದೆ ಎಂದು ಎಚ್ಚರಿಕೆ ನೀಡಿದ್ದಾರೆ.

ದೇಶವ್ಯಾಪಿ ಸಮೀಕ್ಷೆ ಅನಿವಾರ್ಯ

ಹಿಂದುಳಿದವರನ್ನು ಸಮಾಜದ ಮುಖ್ಯವಾಹಿನಿಗೆ ತರಲು ಸಮೀಕ್ಷೆ ಅನಿವಾರ್ಯವಾಗಿದ್ದು, ಈ ದಿಸೆಯಲ್ಲಿ ದೇಶದ ಪ್ರತಿ ನಾಗರಿಕನ ಆರ್ಥಿಕ ,ಸಾಮಾಜಿಕ, ಶೈಕ್ಷಣಿಕ, ರಾಜಕೀಯ ಸ್ಥಿತಿಗತಿಯ ಮಾಹಿತಿ ಅತ್ಯಗತ್ಯವಾಗಿದೆ. ಇದು ಭಾಗೀಧಾರಿ ನ್ಯಾಯ ಸಮ್ಮೇಳನದ ಮೂಲ ಉದ್ದೇಶ ಎಂದು ವಿವರಿಸಿದರು.

ಪ್ರತಿಯೊಬ್ಬ ಪ್ರಜೆಯ ಆರ್ಥಿಕ, ಸಾಮಾಜಿಕ, ಶೈಕ್ಷಣಿಕ, ರಾಜಕೀಯ ಹಾಗೂ ಔದ್ಯೋಗಿಕ ಸ್ಥಿತಿಗತಿಗಳ ಬಗ್ಗೆ ಮಾಹಿತಿ ಪಡೆಯುವುದು ಅತ್ಯಗತ್ಯ. ನಮ್ಮ ಸಂವಿಧಾನ ಸಾಮಾಜಿಕ ನ್ಯಾಯ ಬೆಂಬಲಿಸುತ್ತದೆ. ದೇಶಕ್ಕೆ ಸ್ವಾತಂತ್ರ್ಯ ಬಂದ ನಂತರ ಸಮಾನತೆಯೆಂಬುದು ದೇಶದಲ್ಲಿ ಸ್ಥಾಪಿತವಾಗಿದೆಯೇ ಎಂಬ ಬಗ್ಗೆ ತಿಳಿದುಕೊಳ್ಳಲು ಇಂತಹ ಸಮೀಕ್ಷೆ ನಡೆಸಲೇಬೇಕಾಗುದಕ್ಕೆ, ಸಾಮಾಜಿಕ ಆರ್ಥಿಕ ಸಮೀಕ್ಷೆ ನಡೆಸಬೇಕೆಂಬುದು ರಾಹುಲ್ ಗಾಂಧಿಯವರು ಬದ್ಧರಾಗಿದ್ದಾರೆ ಎಂದು ಹೇಳಿದರು.

ಕೇವಲ ಜಾತಿಗಣತಿ ಮಾಡುವ ಜೊತೆಗೆ ಆರ್ಥಿಕ ,ಸಾಮಾಜಿಕ ಸಮೀಕ್ಷೆ ನಡೆಸಿದಾಗ ಮಾತ್ರ, ಹಿಂದುಳಿದವರನ್ನು ಸಮಾಜದ ಮುಖ್ಯವಾಹಿನಿಗೆ ತರಲು ಸಾಧ್ಯವಾಗುತ್ತದೆ. ಇದು ಭಾಗೀಧಾರಿ ನ್ಯಾಯ ಸಮ್ಮೇಳನದ ಮೂಲ ಉದ್ದೇಶ ಎಂದು ವಿವರಿಸಿದರು. ಮುಂದಿನ ದಿನಗಳಲ್ಲಿ ದೇಶದೆಲ್ಲೆಡೆ ಈ ನಿಟ್ಟಿನಲ್ಲಿ ಜಾಗೃತಿ ಮೂಡಿಸುವ ಕೆಲಸ ಮಾಡುತ್ತೇವೆ ಎಂದು ತಿಳಿಸಿದರು.

ಸಾಮಾಜಿಕ ನ್ಯಾಯಕ್ಕಾಗಿ ರಾಹುಲ್ ಗಾಂಧಿಯವರು ಧೈರ್ಯ, ಸ್ಪಷ್ಟತೆ ಮತ್ತು ಸಹಾನುಭೂತಿಯಿಂದ ನಾಯಕತ್ವ ವಹಿಸಿದ್ದಕ್ಕಾಗಿ ನಾನು ಅವರಿಗೆ ಧನ್ಯವಾದಗಳನ್ನು ಅರ್ಪಿಸುತ್ತೇನೆ. ಇಂದಿನ ಭಾರತದಲ್ಲಿ ರಾಹುಲ್ ಗಾಂಧಿಯವರು ಮತ್ತು ಕಾಂಗ್ರೆಸ್ ಪಕ್ಷವು ಮಾತ್ರ ಹಿಂದುಳಿದ ವರ್ಗಗಳಿಗೆ ಮತ್ತು ಎಲ್ಲಾ ಅಂಚಿನಲ್ಲಿರುವವರಿಗೆ ನ್ಯಾಯ ನೀಡಲು ನೈತಿಕ ಬದ್ಧತೆ ಮತ್ತು ರಾಜಕೀಯ ಇಚ್ಛಾಶಕ್ತಿಯನ್ನು ಹೊಂದಿದೆ. ಇದೊಂದು ಹೊಸ ಅಧ್ಯಾಯದ ಆರಂಭವಾಗಿರಲಿ. ಶೋಷಿತರು ಒಗ್ಗೂಡಿದಾಗ, ಇತಿಹಾಸವು ನ್ಯಾಯದ ಕಡೆಗೆ ಬಾಗುತ್ತದೆ. ನಾವು ಒಟ್ಟಾಗಿ ಸಂಘಟಿತರಾದಾಗ, ನಾವು ಕೇವಲ ನಮ್ಮ ಹಕ್ಕುಗಳಿಗಾಗಿ ಹೋರಾಡುವುದಿಲ್ಲ, ಭಾರತದ ಆತ್ಮಕ್ಕಾಗಿ ಹೋರಾಡುತ್ತೇವೆ ಎಂದರು.

ಈ ಸಮ್ಮೇಳನ ಏಕೆ ಅಗತ್ಯವೆಂದು ತಿಳಿಯಲು ಶತಮಾನಗಳಿಂದ ಸಮಾನತೆಯನ್ನು ನಿರಾಕರಿಸಿದ ಸಾಮಾಜಿಕ ರಚನೆಗಳನ್ನು ನಾವು ಪರಿಶೀಲಿಸಬೇಕು. ಬಿಜೆಪಿ ಮತ್ತು ಆರ್‌ಎಸ್‌ಎಸ್ ಸಂಸ್ಥೆಯು ಈ ಅನ್ಯಾಯವನ್ನು ಹೊಸ ರೂಪಗಳಲ್ಲಿ ಬಲಪಡಿಸುತ್ತಲೇ ಇರುತ್ತದೆ. ಈ ಜಾತಿ-ಆಧಾರಿತ ಅಸಮಾನತೆಯು ಕೇವಲ ಆರ್ಥಿಕವಾಗಿಲ್ಲ, ಸಾಮಾಜಿಕವಾಗಿ ರಚಿತವಾದ ಹಿಂಸೆ. ಬಿಜೆಪಿ ಮತ್ತು ಆರ್‌ಎಸ್‌ಎಸ್‌ಗೆ ಈ ವ್ಯವಸ್ಥೆಯನ್ನು ಬುಡಮೇಲು ಮಾಡಲು ಪ್ರಯತ್ನಿಸುವುದಿಲ್ಲ. ಬದಲಿಗೆ ಇದನ್ನು ಪವಿತ್ರಗೊಳಿಸಲು ಬಯಸುತ್ತದೆ. ಶ್ರೇಣೀಕೃತ ವ್ಯವಸ್ಥೆ ಅವರ ಕನಸು ಎಂದು ಹೇಳಿದರು.

ಕರ್ನಾಟಕದಲ್ಲಿ ನಮ್ಮ ಸರ್ಕಾರವು ಹಿಂದುಳಿದ ವರ್ಗಗಳ ಸಬಲೀಕರಣ ನೀತಿಗಳನ್ನು ಜಾರಿಗೊಳಿಸುವ ಮೊದಲು ಸಾಮಾಜಿಕ-ಆರ್ಥಿಕ ಮತ್ತು ಶೈಕ್ಷಣಿಕ ಸಮೀಕ್ಷೆಯನ್ನು ನಡೆಸಲಾಗುತ್ತಿದೆ. ಕಳೆದ 10 ವರ್ಷಗಳಲ್ಲಿ ಜನಸಂಖ್ಯೆಯ ಬದಲಾವಣೆಯಿಂದಾಗಿ ನಮಗೆ ತಾಜಾ ದತ್ತಾಂಶದ ಅಗತ್ಯವಿದೆ. ನಮ್ಮ ಕಾರ್ಯಯೋಜನೆಯು ನೈತಿಕವಾಗಿದೆ ಮತ್ತು ಈ ನೈತಿಕತೆಯು ಸಾಮಾಜಿಕ ನ್ಯಾಯವನ್ನು ಖಾತರಿಪಡಿಸುತ್ತದೆ ಎಂದು ನಾನು ದೃಢವಾಗಿ ಹೇಳುತ್ತೇನೆ. ಕರ್ನಾಟಕದ ಸಾಮಾಜಿಕ ನ್ಯಾಯದ ಮಾದರಿಯು ದತ್ತಾಂಶ, ಭ್ರಾತೃತ್ವ ಮತ್ತು ಘನತೆಯಲ್ಲಿ ಬೇರೂರಿದೆ. ಸಮಾನತೆ ಮತ್ತು ಸಬಲೀಕರಣಕ್ಕಾಗಿ ಇದನ್ನು ರಾಷ್ಟ್ರೀಯ ಮಾದರಿಯನ್ನಾಗಿಸುವ ಸಮಯ ಕೂಡಿಬಂದಿದೆ ಎಂದು ಸಿಎಂ ಗಟ್ಟಿಯಾಗಿ ಹೇಳಿದರು.

ಈ ಸಮ್ಮೇಳನವು ರಾಷ್ಟ್ರೀಯ ಐಕ್ಯತೆಗೆ ವೇದಿಕೆಯಾಗಲಿ. ನಾನು ರಾಷ್ಟ್ರವ್ಯಾಪಿ ಜಾತಿ ಗಣತಿ, ರಾಜಕೀಯ ಮೀಸಲಾತಿ, ಪ್ರಮಾಣಾನುಗುಣ ಶೇ 75ರಷ್ಟು ಪ್ರಾತಿನಿಧ್ಯ, ಶೈಕ್ಷಣಿಕ ಸಬಲೀಕರಣ, ಆರ್ಥಿಕ ಅವಕಾಶಗಳು ಮತ್ತು ಸಾಮಾಜಿಕ ಜಾಗೃತಿಯನ್ನು ನಮ್ಮ ಹಿಂದುಳಿದ ವರ್ಗಗಳ ಉನ್ನತಿಗೆ ಅಗತ್ಯವಾದ ಆಧಾರಸ್ತಂಭಗಳೆಂದು ಬೆಂಬಲಿಸುತ್ತೇನೆ ಎಂದು ಹೇಳಿದರು.

ಮುಖ್ಯವಾಹಿನಿಗೆ ಬರುವವರೆಗೆ ವಿಶ್ರಮಿಸಲ್ಲ

ಕಾರಣ, ಈಗ ಕಾಂಗ್ರೆಸ್ ಪಕ್ಷ ಇದನ್ನು ಪ್ರಮುಖ ವಿಷಯವನ್ನಾಗಿ ತೆಗೆದುಕೊಂಡು ಹಿಂದುಳಿದ ವರ್ಗಗಳ ಜನ ಸಂಖ್ಯೆಗೆ ಅನುಗುಣವಾಗಿ ಮೀಸಲಾತಿ ದೊರೆಯಬೇಕು ಎಂಬುದು ತಮ್ಮ ಆಗ್ರಹವಾಗಿದೆ ಎಂದರು.

ಈಗಾಗಲೇ ತೆಲಂಗಾಣದಲ್ಲಿ ಜಾತಿ ಜನಗಣತಿ ನಡೆದು ಇಡೀ ದೇಶಕ್ಕೆ ಕ್ರಾಂತಿಕಾರಕ ಸಂದೇಶ ನೀಡಿದ್ದು ಇದರಿಂದಾಗಿ ತೆಲಂಗಾಣದಲ್ಲಿರುವ ಹಿಂದುಳಿದವರಿಗೆ ಸಹಜವಾಗಿಯೇ ಶೇ.50 ಕ್ಕಿಂತ ಮಿಗಿಲಾಗಿ ಮೀಸಲಾತಿ ಸೌಲಭ್ಯ ದೊರೆತಿದ್ದು, ಇದು ಸಾಮಾಜಿಕ ನ್ಯಾಯದ ಪ್ರತೀಕವಾಗಿದ್ದು ಇದೇ ಮಾದರಿಯಲ್ಲಿ ಕರ್ನಾಟಕದಲ್ಲಿ ಸಹ ಜಾತಿ ಜನಗಣತಿ ನಡೆಯಲಿದ್ದು, ತೆಲಂಗಾಣ ಮಾದರಿಯಲ್ಲಿಯೇ ಕೇಂದ್ರ ಜಾತಿಗಣತಿ ನಡೆಸಬೇಕು ಎನ್ನುವುದು ತಮ್ಮ ಒತ್ತಾಯವಾಗಿದೆ ಎಂದರು.

ಮಾಧ್ಯಮ, ಕಾರ್ಯಾಂಗ, ಔದ್ಯೋಗಿಕ, ನ್ಯಾಯಾಂಗ ಕ್ಷೇತ್ರದಲ್ಲಿ ಹಿಂದುಳಿದವರ ಪ್ರಾತಿನಿಧ್ಯ ತೀರಾ ಕಡಿಮೆ ಇದೆ. ಶೇ.50 ಕ್ಕಿಂತ ಮಿಗಿಲಿರುವ ಈ ಜಾತಿಗಳು ಮೇಲಿನ ಎಲ್ಲಾ ಕ್ಷೇತ್ರಗಳಲ್ಲಿ ಪಾಲ್ಗೊಳ್ಳಬೇಕಾದರೆ ಜಾತಿ ಸಮೀಕ್ಷೆ ಪ್ರಮುಖ ಅಸ್ತ್ರವಾಗಲಿದೆ. ಈ ದಿಶೆಯಲ್ಲಿ ಕಾಂಗ್ರೆಸ್ ಪಕ್ಷ ಯಾವ ರಾಜ್ಯದಲ್ಲಿ ಅಧಿಕಾರಕ್ಕೆ ಬರುತ್ತದೋ ಆ ರಾಜ್ಯದಲ್ಲಿ ಜಾತಿ ಸಮೀಕೆ ಮಾಡಲಾಗುವುದು ಎಂದರು.

ಹಿಂದುಳಿದವರು ಶಿಕ್ಷಣ, ಅದರಲ್ಲೂ ಇಂಗ್ಲೀಷ್ ಶಿಕ್ಷಣ ಕಲಿಯಬೇಕು, ಬಿಜೆಪಿಯವರು ಹಿಂದಿ ಭಾಷೆ ಹೇರುವ ಮೂಲಕ ಬಹುಸಂಖ್ಯಾತ ಹಿಂದುಳಿದವರ ಭಾಷೆಯಾದ ಕನ್ನಡ, ತೆಲುಗು, ತಮಿಳು, ಮಲಯಾಳಿ ದಮನ ಮಾಡಲು ಹೊರಟಿದೆ. ಹೀಗಾಗಿ ಪ್ರಾದೇಶಿಕ ಭಾಷೆಗಳು ಉಳಿಯಬೇಕು. ಇದರ ಜೊತೆಗೆ ಇಂಗ್ಲೀಷನ್ನು ಕಲಿಯಬೇಕು ಎಂದು ಸಲಹೆ ಮಾಡಿದರು. ಖಾಸಗಿ ಶಿಕ್ಷಣ ಸಂಸ್ಥೆಗಳು ಸ್ಥಾಪನೆಯಲ್ಲಿ ಸಹ ಹಿಂದುಳಿದವರ ಸಂಖ್ಯೆ ತೀರಾ ಕಡಿಮೆ ಇದೆ. ಎಲ್ಲಾ ಖಾಸಗಿ ಶಿಕ್ಷಣ ಸಂಸ್ಥೆಗಳಲ್ಲಿ ಹಿಂದುಳಿದವರಿಗೆ ಮೀಸಲಾತಿ ದೊರೆಯಬೇಕು ಎಂದ ಅವರು, ನಾನು ಹಿಂದುಳಿದವರ ಸಮಸ್ಯೆ ಪರಿಹರಿಸುವಲ್ಲಿ ಪ್ರಮಾದ ಮಾಡಿದ್ದೇನೆ ಅದಕ್ಕಾಗಿ ಈ ವಿಷಯವನ್ನು ಅತಿ ಹೆಚ್ಚು ವೇಗದಲ್ಲಿ ತೆಗೆದುಕೊಳ್ಳುವ ಮೂಲಕ ನಾನು ಅಂದುಕೊಂಡಿದ್ದನ್ನು ಯಾವಾಗಲೂ ಬಿಟ್ಟಿಲ್ಲ. ಹಿಂದುಳಿದವರನ್ನು ಮುಖ್ಯ ವಾಹಿನಿಗೆ ತರುವುದು ಈಗಿನ ಪ್ರಮುಖ ಆದ್ಯತೆಯಾಗಿದೆ ಎಂದು ಘೋಷಿಸಿದರು.

ರಾಜಕಾರಣದಲ್ಲಿ ಹಿಂದುಳಿದವರು ಪ್ರಬಲ ಶಕ್ತಿಯಾಗಿ ಬೆಳೆಯಬೇಕು. ಕೀಳರಿಮೆಯಿಂದ ಹೊರಬಂದು ನಿಮ್ಮ ಶಕ್ತಿ ಪ್ರದರ್ಶನ ಮಾಡಿ ರಾಜಕೀಯ ಪ್ರಾತಿನಿಧ್ಯ ಪಡೆಯಬೇಕು. ಈ ದಿಸೆಯಲ್ಲಿ ಕಾಂಗ್ರೆಸ್ ಪಕ್ಷ ಸದಾ ನಿಮ್ಮೊಂದಿಗೆ ಇರಲಿದೆ ಎಂದು ಅಭಯ ನೀಡಿದರು.

ಈ ಸಮಾರಂಭದಲ್ಲಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಕರ್ನಾಟಕದ ಮುಖ್ಯಮಂತ್ರಿ ಸಿದ್ದರಾಮಯ್ಯ, ರಾಜಸ್ಥಾನ ಮುಖ್ಯಮಂತ್ರಿ ಅಶೋಕ ಗೆಹ್ಲೋಟ್, ಛತ್ತೀಸ್‌ಘಡ ಮುಖ್ಯಮಂತ್ರಿ ಭೂಪೇಶ್ ಬಗೇಲ್, ಪಾಂಡಿಚೇರಿ ಮುಖ್ಯಮಂತ್ರಿ ವಿ.ನಾರಾಯಣಸ್ವಾಮಿ, ಎಐಸಿಸಿ ಓಬಿಸಿ ಘಟಕದ ರಾಷ್ಟ್ರೀಯ ಅಧ್ಯಕ್ಷ ಅನಿಲ್ ಜೈ ಹಿಂದ್, ರಾಷ್ಟ್ರೀಯ ಸಂಚಾಲಕ ಬಿ.ಕೆ.ಹರಿಪ್ರಸಾದ್, ತೆಲಂಗಾಣ ಉಪಮುಖ್ಯಮಂತ್ರಿ ಭಟ್ಟಿ ವಿಕ್ರಮಾರ್ಕ, ರಾಜಸ್ಥಾನ ಮಾಜಿ ಉಪಮುಖ್ಯಮಂತ್ರಿ ಸಚಿನ್ ಪೈಲಟ್, ಸಣ್ಣ ನೀರಾವರಿ ಸಚಿವ ಎನ್. ಎಸ್.ಬೋಸರಾಜು, ಓಬಿಸಿ ಘಟಕದ ರಾಷ್ಟ್ರೀಯ ಮುಖಂಡರಾದ ಅಜಯ್ ಲಲ್ಲಾ ಇದ್ದರು.

ಮೇಲ್ಜಾತಿಯ ಮೋದಿ ಒಬಿಸಿಯಾದರು : ಖರ್ಗೆ

ಭಾಗೀದಾರ ಸಮ್ಮೇಳನದಲ್ಲಿ ಮಾತನಾಡಿದ ಅವರು, ನಾನು ಹಿಂದುಳಿದ ವರ್ಗದವನಾಗಿದ್ದು, ಸಾಕಷ್ಟು ಕಿರುಕುಳಕ್ಕೆ ಒಳಗಾಗಿದ್ದೇನೆ ಎಂದು ಪ್ರಧಾನಿ ಅನೇಕ ಬಾರಿ ಹೇಳಿದ್ದಾರೆ. ಆದರೆ, ಈಗ ಅವರು ಎಲ್ಲರನ್ನೂ ಹಿಂಸಿಸುತ್ತಿದ್ದಾರೆ.ಅವರೊಬ್ಬ ಸುಳ್ಳುಗಳ ಸರದಾರ ಎಂದು ಕಿಡಿ ಕಾರಿದರು.

75 ವರ್ಷವಾದವರು ನಿವೃತ್ತರಾಗಬೇಕು ಎಂಬ ಆರ್‌ಎಸ್‌ಎಸ್ ಸೂಚನೆ ಪಾಲಿಸಲು ಮೋದಿ ಸಿದ್ದರಿದ್ದಾರಾ ಎಂದು ಪ್ರಶ್ನಿಸಿದ ಅವರು, ಕಳೆದ ಸಾರ್ವತ್ರಿಕ ಚುನಾವಣೆಯಲ್ಲಿ ಮೋದಿ ಸರಕಾರವನ್ನು ಕೆಳಗಿಳಿಸಲು ವಿರೋಧ ಪಕ್ಷಗಳಿಗೆ ಕೇವಲ 20-25 ಸ್ಥಾನಗಳು ಕಡಿಮೆಯಾದವು ಎಂದ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಶುಕ್ರವಾರ ವಿಷಾದ ವ್ಯಕ್ತಪಡಿಸಿದ್ದಾರೆ.

ಸಮಾಜದಲ್ಲಿ ಮುಂದೆ ಸಾಗಲು ಮೂರು ಅಂಶಗಳು ಅಗತ್ಯವಾಗಿ ಬೇಕಾಗುತ್ತದೆ.ಮಾನಸಿಕ ಬಲ, ಮನುಷ್ಯ ಬಲ ಮತ್ತು ಆರ್ಥಿಕ ಬಲ. ಇದರಲ್ಲಿ ಒಂದು ಇಲ್ಲದಿದ್ದರೂ ದೇಶವನ್ನು ಮುನ್ನೆಡಸಲು ಸಾಧ್ಯವಿಲ್ಲ. ಹಿಂದುಳಿದ ವರ್ಗಗಳೆಲ್ಲವೂ ಒಂದಾಗಿ ಬಿಜೆಪಿಯನ್ನು ವಿರೋಧಿಸಬೇಕು ಎಂದು ಖರ್ಗೆ ಹೇಳಿದರು.

ರಸಗೊಬ್ಬರ ಕೊರತೆ ಇಲ್ಲ

ಒಂದು ವೇಳೆ ಕೆಲವು ನಿರ್ಧಿಷ್ಟ ಪ್ರದೇಶಗಳಲ್ಲಿ ಯೂರಿಯಾ ಸೇರಿದಂತೆ ರಸಗೊಬ್ಬರದ ಕೊರತೆ ಕಂಡುಬಂದಲ್ಲಿ ಹೆಚ್ಚುವರಿಯಾಗಿ ಉಳಿಕೆಯಾಗಿರುವ ಜಿಲ್ಲೆಗಳಿಂದ ಮರುವಿಂಗಡಣೆ ಮಾಡಿ, ಸರಬರಾಜು ಮಾಡಲಾಗುವುದು, ಕೃಷಿಕರು ಯಾವುದೇ ಗೊಂದಲಕ್ಕೆ ಒಳಗಾಗಬಾರದು ಎಂದು ಸಚಿವ ಎನ್. ಚಲುವರಾಯಸ್ವಾಮಿ ಮನವಿ ಮಾಡಿದರು.

ಕೇಂದ್ರದಿಂದ ಎಷ್ಟು ಹಂಚಿಕೆ?: ಜುಲೈವರೆಗೆ ರಾಜ್ಯಕ್ಕೆ ಕೇಂದ್ರ ಸರ್ಕಾರದಿಂದ 5,34,009 ಮೆ.ಟನ್. ರಸಗೊಬ್ಬರ (ಎಲ್ಲಾ ವಿಧದ ರಸಗೊಬ್ಬರ ಸೇರಿ) ಹಂಚಿಕೆಯಾಗಿದೆ. ಇದರಲ್ಲಿ ಈವರೆಗೆ 4,30,633 ಮೆ.ಟನ್. ಸರಬರಾಜಾಗಿದೆ. ಏಪ್ರಿಲ್ ನಿಂದ ಜುಲೈವರೆಗೆ ರಾಜ್ಯದಲ್ಲಿ 6,80,655 ಮೆಟ್ರಿಕ್ ಟನ್ ಯೂರಿಯಾ ಬೇಡಿಕೆ ಇದ್ದು, ಕೇಂದ್ರ ಸರ್ಕಾರದಿಂದ 6,82,500 ಮೆ. ಟನ್ ಹಂಚಿಕೆಯಾಗಿದೆ. ಇದರಲ್ಲಿ 5,26,817 ಮೆಟ್ರಿಕ್ ಟನ್ ಸರಬರಾಜಾಗಿದೆ ಎಂದು ತಿಳಿಸಿದ್ದಾರೆ.

ರಾಜ್ಯದಲ್ಲಿ 3,46,499 ಹಳೆ ಯೂರಿಯಾ ದಾಸ್ತಾನು ಉಳಿಕೆ ಇದ್ದು, ಕೇಂದ್ರದಿಂದ ಸರಬರಾಜಾದ ಯೂರಿಯಾ ಸೇರಿದಂತೆ 8,73,315 ಮೆಟ್ರಿಕ್ ಟನ್ ಒಟ್ಟು ಲಭ್ಯತೆ ಇತ್ತು, ಇದರಲ್ಲಿ 7,08,859 ಮೆಟ್ರಿಕ್ ಟನ್ ಯೂರಿಯಾವನ್ನು ವಿವಿಧ ಜಿಲ್ಲೆಗಳಿಗೆ ವಿತರಿಸಿದ್ದು, ರೈತರಿಗೂ ಮಾರಾಟ ಮಾಡಲಾಗಿದೆ. ಇನ್ನು 1,64,56 ಮೆಟ್ರಕ್ ಟನ್ ಯೂರಿಯ ದಾಸ್ತಾನು ಉಳಿಕೆಯಿದೆ. ಅಲ್ಲದೆ ಕೇಂದ್ರದಿಂದ ಹಂತ ಹಂತವಾಗಿ ಪೂರೈಕೆಯಾಗುವ ರಸಗೊಬ್ಬರವನ್ನು ಆಗಿಂದಾಗಲೇ ಹಂಚಿಕೆ ಮಾಡಿ ವರ್ಗಾವಣೆ ಮಾಡಲಾಗುವುದು ಎಂದರು.

ರಾಜ್ಯ ಸರ್ಕಾರ ನಿರಂತರವಾಗಿ ಕೇಂದ್ರ ಸರ್ಕಾರದೊಂದಿಗೆ ಸಂಪರ್ಕದಲ್ಲಿದ್ದು, ಮುಖ್ಯಮಂತ್ರಿ ಸಿದ್ದರಾಮಯ್ಯ ರವರು ಸಹ ಯೂರಿಯ ಶೀಘ್ರ ಪೂರೈಕೆಗೆ ಪತ್ರ ಬರೆದು ಮನವಿ ಮಾಡಿದ್ದಾರೆ. ಯಾವುದೇ ಸಮಸ್ಯೆಗಳಿಲ್ಲದಂತೆ ರಸಗೊಬ್ಬರ ಪೂರೈಕೆ ನಿವಾರಿಸಲು ಅಧಿಕಾರಿಗಳ ತಂಡಕ್ಕೆ ಸೂಚಿಸಲಾಗಿದೆ ಎಂದು ಎನ್. ಚಲುವರಾಯಸ್ವಾಮಿ ರವರು ತಿಳಿಸಿದ್ದಾರೆ.

ನ್ಯಾನೋ ಯೂರಿಯಾ ಕೂಡ ಪರಿಣಾಮಕಾರಿ : ರಾಜ್ಯದಲ್ಲಿ ಅಧಿಕ ಪ್ರಮಾಣದಲ್ಲಿ ನ್ಯಾನೋ ಯೂರಿಯಾ ಕೂಡ ಲಭ್ಯವಿದ್ದು ಇದು ಸಹ ಹೆಚ್ಚು ಪರಿಣಾಮಕಾರಿ ಮತ್ತು ಲಾಭದಾಯಕ ಎಂಬುದು ಕೃಷಿ ಇಲಾಖೆ, ಕೃಷಿ ವಿಶ್ವವಿದ್ಯಾಲಯಗಳು, ರೈತರು ನಡೆಸಿದ ಪ್ರಯೋಗಗಳ ಸಾಬೀತಾಗಿದ್ದು. ಉಳಿತಾಯ ಕೂಡ ಆಗಲಿದೆ. ಆದ್ದರಿಂದ ಕೃಷಿಕರು ಈ ಬಗ್ಗೆಯೂ ಗಮನಹರಿಸಬೇಕೆಂದು ಸಚಿವರು ಹೇಳಿದರು.

ರಾಜ್ಯಕ್ಕೆ ಹಂಚಿಕೆಯಾದ ರಸಗೊಬ್ಬರ ಪೂರೈಕೆ

ಕೆಲ ರಸಗೊಬ್ಬರ ಕಂಪನಿಗಳು ಕೇಂದ್ರವು ಮಾಡಿದ ಹಂಚಿಕೆಯ ಪ್ರಕಾರ ಯೂರಿಯಾ ಗೊಬ್ಬರ ಪೂರೈಸಲು ಅಸಮರ್ಥತೆಯನ್ನು ವ್ಯಕ್ತಪಡಿಸಿವೆ ಎಂದು ಹೇಳಿದ್ದಾರೆ.

ರಾಜ್ಯದಲ್ಲಿ ಯೂರಿಯಾ ಪೂರೈಕೆಯ ತುರ್ತು ಅವಶ್ಯಕತೆಯಿದೆ. ರಾಜ್ಯದ ಈ ವರ್ಷದ ಆರಂಭದಲ್ಲಿಯೇ ಮಳೆ ಸುರಿದಿದೆ. ಹಿಂದಿನ ವರ್ಷಗಳಿಗೆ ಹೋಲಿಸಿದರೆ ವಿವಿಧ ಬೆಳೆಗಳ ವ್ಯಾಪ್ತಿಯು ಹೆಚ್ಚಾಗಿದೆ. ತುಂಗಭದ್ರಾ, ಕಾವೇರಿ ಮತ್ತು ಕೃಷ್ಣಾ ನದಿಗಳ ಆಯಕಟ್ಟಿನ ಪ್ರದೇಶಗಳಲ್ಲಿ ನೀರನ್ನು ಮೊದಲೇ ಬಿಡುಗಡೆ ಮಾಡಲಾಗಿದೆ ಎಂದು ತಿಳಿಸಿದ್ದಾರೆ.

ಮುಂಗಾರು ಆರಂಭಿಕ ಬಿತ್ತನೆ ಚಟುವಟಿಕೆ ಆರಂಭವಾಗಿದೆ. ಹೆಚ್ಚಿನ ಗೊಬ್ಬರ ಬಳಸುವ ಬೆಳೆಯಾದ ಮೆಕ್ಕೆಜೋಳದ ವಿಸ್ತೀರ್ಣವು ಸುಮಾರು 2 ಲಕ್ಷ ಹೆಕ್ಟೇರ್‌ಗಳಷ್ಟು ಹೆಚ್ಚಾಗಿದೆ. ದ್ವಿದಳ ಧಾನ್ಯಗಳ ವಿಸ್ತೀರ್ಣವು ಹಿಂದಿನ ವರ್ಷಗಳಿಗೆ ಹೋಲಿಸಿದರೆ ಕಡಿಮೆ ಆಗಿದೆ ಎಂದಿದ್ದಾರೆ.

13,000 ಹೆಕ್ಟೇರ್ ಖಾರಿಫ್ ಪೂರ್ವ ಪ್ರದೇಶದಲ್ಲಿ ಬಿತ್ತನೆ ಮಾಡಲಾಗಿದೆ. ಯೂರಿಯಾ ಕೊರತೆಯು ರೈತರಲ್ಲಿ ಅಶಾಂತಿ ಆತಂಕವನ್ನು ಸೃಷ್ಟಿಸುತ್ತಿದೆ. ರೈತರ ಹಿತದೃಷ್ಟಿಯಿಂದ ರಾಜ್ಯ ಹಂಚಿಕೆ ಪ್ರಕಾರ ರಸಗೊಬ್ಬರ ಪೂರೈಸಿ. ಬಾಕಿ ಕೊರತೆ ಇರುವ ಯೂರಿಯಾದ ಪೂರೈಕೆಯನ್ನು ತ್ವರಿತಗೊಳಿಸಲು ಸಂಬಂಧಪಟ್ಟವರಿಗೆ ನಿರ್ದೇಶನ ನೀಡುವಂತೆ ಸಿಎಂ ಸಿದ್ದರಾಮಯ್ಯ ಮನವಿ ಮಾಡಿದ್ದಾರೆ.

ಅತಿಯಾದ ರಸಗಬ್ಬರ ಬಳಕೆ ಭೂಮಿಯ ಫಲವತ್ತತೆ ಹಾಗೂ ಮಾನವನ ಆರೋಗ್ಯದ ಮೇಲೆ ವ್ಯತಿರಿಕ್ತ ಪರಿಣಾಮ ಬೀರುತ್ತಿದ್ದು, ಮುಂದಿನ ಭವಿಷ್ಯದ ದೃಷ್ಟಿಯಿಂದ ರಸಗೊಬ್ಬರಗಳ ಬಳಕೆ ಹಸಿರು ಗೊಬ್ಬರ, ಜೈವಿಕ ಗೊಬ್ಬರಗಳ ಬಳಕೆ ಹೆಚ್ಚಿಸುವುದು ಅಗತ್ಯವಿದೆ. ಈ ಬಗ್ಗೆಯೂ ರೈತರಿಗೆ ಮನವರಿ